## ಕರ್ನಾಟಕ ಸರ್ಕಾರ

ಸಂಖ್ಯೆ. ಗ್ರಾಅಪ 295 ಜಿಪಅ 2012

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ. 17-10-2012

### ಸುತ್ತೋಲೆ

ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ 1966 ನಿಯಮ 23ರ ಪ್ರಕಾರ ಪ್ರತಿಯೊಬ್ಬ ಸರ್ಕಾರಿ ನೌಕರರು : ಅಧಿಕಾರಿಗಳು ಆಯಾಯ ವರ್ಷದ ಕೊನೆಯಲ್ಲಿ ಅಂದರೆ ಮಾರ್ಚ್ 31ನೇ ತಾರೀಖಿಗೆ ಅಂತ್ಯಗೊಂಡಂತೆ ಅರ್ಜಿಸಿದ ಸ್ಥಿರಾಸ್ತಿ ಮತ್ತು ಚರಾಸ್ತಿಗಳ ವಿವರಗಳನ್ನು ಆಸ್ತಿ ಮತ್ತು ಹೊಣೆಗಾರಿಕೆ ಪಟ್ಟಿಯ ನಮೂನೆ 1 ಮತ್ತು 2ರಲ್ಲಿ ಭರ್ತಿ ಮಾಡಿ ಸಂಬಂಧಪಟ್ಟ ಪ್ರಾಧಿಕಾರಿಗಳಿಗೆ ಆಯಾಯ ವರ್ಷದ ಏಪ್ರಿಲ್ 30ನೇ ತಾರೀಖಿನೊಳಗೆ ಸಲ್ಲಿಸುವುದು ಕಡ್ಡಾಯವಾಗಿರುತ್ತದೆ. ಜಿಲ್ಲಾ ಪಂಚಾಯತ್ / ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖಾ ಸೇವೆಗೆ ಸೇರಿದ ಗ್ರೂಪ್ – ಎ ವೃಂದಗಳಾದ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಹಿರಿಯ ಭೂ ವಿಜ್ಞಾನಿಗಳಿಗೆ ಸಂಬಂಧಿಸಿದಂತೆ ಆಸ್ತಿ ಮತ್ತು ಋಣ ಪಟ್ಟಿಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ನಿರ್ವಹಿಸಬೇಕಾಗಿರುತ್ತದೆ.

ಅಲ್ಲದೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಹೊರಡಿಸಿರುವ ಅಧಿಕೃತ ಜ್ಞಾಪನ ಸಂಖ್ಯೆ. ಸಿ ಆಸುಇ 5 ಸೇನನಿ 87 ದಿನಾಂಕ. 14-07-1987ರಲ್ಲಿ ಸರ್ಕಾರಿ ಅಧಿಕಾರಿ : ನೌಕರರ ಆಸ್ತಿ ಮತ್ತು ಋಣ ಪಟ್ಟಿಗಳನ್ನು ಯಾವ ಪ್ರಾಧಿಕಾರ ನಿರ್ವಹಿಸಬೇಕೆಂದು ಸೂಚಿಸಿದ್ದು, ಅದರಲ್ಲಿ ಗ್ರೂಪ್ – ಎ ಅಧಿಕಾರಿಗಳ ಆಸ್ತಿ ಮತ್ತು ಋಣ ಪಟ್ಟಿಗಳನ್ನು ಸಂಬಂಧಪಟ್ಟ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳು ನಿರ್ವಹಿಸಬೇಕೆಂದು ಸೂಚಿಸಿರುತ್ತದೆ.

ಹಲವಾರು ಪ್ರಕರಣಗಳಲ್ಲಿ ಸೇವೆಯಿಂದ ನಿವೃತ್ತಿ ಹೊಂದಿದ ಅಧಿಕಾರಿಗಳು ಸೇವೆಯಲ್ಲಿದ್ದಾಗ ಎಸಗಿರುವ ಲೋಪಗಳಿಗೆ ಸಂಬಂಧಿಸಿದಂತೆ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿದ್ದು, ಅಂತಹ ಪ್ರಕರಣಗಳಲ್ಲಿ ಅವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಅವಕಾಶವಿಲ್ಲದ ಸಂದರ್ಭಗಳಲ್ಲಿ ಅನಿವಾರ್ಯವಾಗಿ ಸರ್ಕಾರಕ್ಕೆ ಉಂಟಾಗಿರುವ ನಷ್ಟವನ್ನು ಸಿವಿಲ್ ದಾವೆ ಹೂಡುವ ಮೂಲಕ ವಸೂಲಿ ಮಾಡಲು ಕ್ರಮ ಕೈಗೊಳ್ಳಬೇಕಾಗಿರುತ್ತದೆ. ಆಸ್ತಿ ಮತ್ತು ಋಣ ಪಟ್ಟಿಗಳ ವಿವರಗಳು ಲಭ್ಯವಿಲ್ಲದ ಸಂದರ್ಭಗಳಲ್ಲಿ ಸಂಬಂಧಿಸಿದ ಅಧಿಕಾರಿಗಳ ಮೇಲೆ ತಕ್ಷಣಕ್ಕೆ ಸಿವಿಲ್ ದಾವೆ ಹೂಡಲು ಸಾಧ್ಯವಾಗುತ್ತಿಲ್ಲ. ಈ ಸಂದರ್ಭದಲ್ಲಿ ಅಧಿಕಾರಿಗಳ ಆಸ್ತಿ ಮತ್ತು ಋಣ ಪಟ್ಟಿಗಳು ಲಭ್ಯವಿಲ್ಲದಿದ್ದಲ್ಲಿ ಸಂಬಂಧಪಟ್ಟ ಮುಖ್ಯ ಇಂಜಿನಿಯರ್ / ಇಲಾಖಾ ಮುಖ್ಯಸ್ಥರಿಂದ ಪಡೆದು ಒದಗಿಸುವಲ್ಲಿ ವಿಳಂಬವಾಗಿರುವುದರಿಂದ ಕೆಲವೊಂದು ಸಂದರ್ಭದಲ್ಲಿ ಸಿವಿಲ್ ದಾವೆ ಹೂಡಲು ಕಷ್ಟ ಸಾಧ್ಯವಾಗುತ್ತಿದೆ. ಲೋಕಾಯುಕ್ತ ದಾಳಿ ಪ್ರಕರಣಕ್ಕೆ ಸಂಬಂಧಿಸಿದಂತೆ ಅಧಿಕಾರಿಗಳ ಆಸ್ತಿ ಮತ್ತು ಋಣ ಪಟ್ಟಿಗಳು ಲಭ್ಯವಿಲ್ಲದೆ ಅವುಗಳನ್ನು ಸಕಾಲದಲ್ಲಿ ಒದಗಿಸದೆ ಇದ್ದಲ್ಲಿ, ತನಿಖೆಯಲ್ಲಿ ವಿಳಂಬವಾಗುವ ಸಾಧ್ಯತೆ ಇರುತ್ತದೆ. ಹಾಗಾಗಿ ಸರ್ಕಾರದ ಮಟ್ಟದಲ್ಲಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹಾಗೂ ಹಿರಿಯ ಭೂ ವಿಜ್ಞಾನಿಗಳ ಆಸ್ತಿ ಮತ್ತು ಹೊಣೆಗಾರಿಕೆ ಪಟ್ಟಿಯನ್ನು ಸಮರ್ಪಕವಾಗಿ ನಿರ್ವಹಿಸುವುದು ಅತ್ಯಂತ ಅವಶ್ಯವಿರುತ್ತದೆ.

---2

ಮುಂದುವರಿದು ಸಾರ್ವಜನಿಕರು, ಸಮಾಜ ಸೇವಕರು ಹಾಗೂ ಇತರರು ಮಾಹಿತಿ ಹಕ್ಕು ಅಧಿನಿಯಮ 2005ರಡಿ ಅರ್ಜಿ ಸಲ್ಲಿಸಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್ / ಹಿರಿಯ ಭೂ ವಿಜ್ಞಾನಿಗಳ ಆಸ್ತಿ ಮತ್ತು ಋಣ ಪಟ್ಟಿಗಳನ್ನು ಒದಗಿಸುವಂತೆ ಕೋರುತ್ತಿದ್ದು, ಸದರಿ ಅಧಿಕಾರಿಗಳ ಆಸ್ತಿ ಮತ್ತು ಋಣ ಪಟ್ಟಿಗಳನ್ನು ಯಾವ ಕಚೇರಿಗಳಲ್ಲಿ ನಿರ್ವಹಿಸಲಾಗುತ್ತಿದೆ ಎಂಬ ಬಗ್ಗೆ ಖಚಿತ ಮಾಹಿತಿ ಲಭ್ಯವಾಗದೆ ಇರುವುದರಿಂದ ಅರ್ಜಿದಾರರು ಕೋರಿರುವ ಮಾಹಿತಿಯನ್ನು ನಿಗಧಿತ ಅವಧಿಯಲ್ಲಿ ಒದಗಿಸದೆ ವಿಳಂಬ ಉಂಟಾದಲ್ಲಿ ಮಾಹಿತಿ ಆಯೋಗದವರು ದಂಡ ವಿಧಿಸುವ ಸಾಧ್ಯತೆಗಳಿರುತ್ತವೆ. ಈ ಮೇಲ್ಕಂಡ ಎಲ್ಲಾ ಕಾರಣಗಳಿಂದ ಸಹಾಯಕ ಕಾರ್ಯಪಾಲಕ ಇಂಜಿನಿಯರ್ / ಹಿರಿಯ ಭೂ ವಿಜ್ಞಾನಿ ವೃಂದವು ಗ್ರೂಪ್ – ಎ ಹುದ್ದೆಯಾಗಿದ್ದು, ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 5 ಸೇನನಿ 87 ದಿನಾಂಕ. 14-05-1987 ರಂತೆ ಸದರಿ ಅಧಿಕಾರಿಗಳ ಆಸ್ತಿ ಮತ್ತು ಋಣ ಪಟ್ಟಿಗಳನ್ನು ಆಡಳಿತ ಇಲಾಖೆಯಿಂದಲೇ ನಿರ್ವಹಿಸಬೇಕಾಗಿರುತ್ತದೆ. ಆದ್ದರಿಂದ, ಈ ವೃಂದದ ಅಧಿಕಾರಿಗಳ ಆಸ್ತಿ ಮತ್ತು ಋಣ ಪಟ್ಟಿಗಳಿಗೆ ಸಂಬಂಧಿಸಿದ ಮೂಲ ಕಡತಗಳನ್ನು ಕೂಡಲೇ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಕಳುಹಿಸಿಕೊಡುವಂತೆ ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರುಗಳಿಗೆ ಸೂಚಿಸಲಾಗಿದೆ.

(ಡಾ: ಇ.ವಿ.ರಮಣರೆಡ್ಡಿ)
ಸರ್ಕಾರದ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಇವರಿಗೆ:

1. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
2. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕೆ.ಆರ್.ಆರ್.ಡಿ.ಎ., ರಾಜಕುಮಾರ್ ರಸ್ತೆ, ರಾಜಾಜಿನಗರ 1ನೇ ಬ್ಲಾಕ್, ಬೆಂಗಳೂರು.
3. ನಿರ್ದೇಶಕರು, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಕಾವೇರಿ ಭವನ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
5. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
6. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತಗಳ ಅಧೀಕ್ಷಕ ಇಂಜಿನಿಯರ್‌ಗಳಿಗೆ
7. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ/ ಉಪ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
8. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
9. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.